


# ಮಹಿಳಾ ಸಬಲೀಕರಣಕ್ಕೆ ದೈತ್ಯ ಹೆಜ್ಜೆ

ಸಮಾಜದಲ್ಲಿ ಮಹಿಳೆಯರು ಮತ್ತು ಮಕ್ಕಳಿಗೆ ಪಾವಿತ್ರ್ಯವಾದ ಸ್ಥಾನವಿದೆ. ಈ ಆಶಯದ ಹಿನ್ನೆಲೆಯಲ್ಲಿ ಸರ್ಕಾರವು ಮಹಿಳೆಯರ ಸಬಲೀಕರಣಕ್ಕೆ ಮತ್ತು ಮಕ್ಕಳ ಅಭಿವೃದ್ಧಿಗೆ ಆದ್ಯತೆಯನ್ನು ನೀಡುತ್ತದೆ. ಮಹಿಳೆಯರು, ಮಕ್ಕಳು, ವೃದ್ಧರು, ವಿಕಲಚೇತನರ ಸರ್ವತೋಮುಖ ಅಭಿವೃದ್ಧಿಗೆ ಸಾಕಷ್ಟು ಯೋಜನೆಗಳನ್ನು ಸರ್ಕಾರ ಜಾರಿಗೆ ತಂದಿದೆ. ಈ ಯೋಜನೆಗಳು ಪೌಷ್ಟಿಕತೆ, ಆರ್ಥಿಕ ಸ್ವಾವಲಂಬನೆ, ಸ್ವಾಭಿಮಾನದ ಬದುಕಿಗೆ ನೆರವು, ನಿರ್ಗತಿಕರಿಗೆ ಆಸರೆ  ಹೀಗೆ ಮಹಿಳೆಯರು ಮತ್ತು ಮಕ್ಕಳ ಬದುಕಿಗೆ ಇಂಬು ನೀಡುವಂತಿವೆ.

ಎಲ್ಲಾ ಅಂಗನವಾಡಿ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರದ ಜೊತೆಗೆ ವಾರದಲ್ಲಿ ಮೂರು ದಿನ ೧೫೦ ಎಂ.ಎಲ್ ಹಾಲನ್ನು ವಿತರಿಸಲಾಗುತ್ತಿದೆ. ಎಲ್ಲಾ ಜಿಲ್ಲೆಯ ತೀವ್ರ ಅಪೌಷ್ಟಿಕ ಮಕ್ಕಳಿಗೆ  ಹಾಗೂ ಉತ್ತರ ಕರ್ನಾಟಕದ ಹಿಂದುಳಿದ ಜಿಲ್ಲೆಗಳಾದ ಬೀದರ್, ಗುಲ್ಬರ್ಗಾ, ರಾಯಚೂರು, ಕೊಪ್ಪಳ ಹಾಗೂ ಯಾದಗಿರಿ ಜಿಲ್ಲೆಯ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ೨೦೦ ಎಂ.ಎಲ್. ಹಾಲಿನ ಜೊತೆಗೆ ಉಳಿದ ೩ ದಿನ ಮೊಟ್ಟೆ ನೀಡಲಾಗುತ್ತಿದೆ. ಮೊಟ್ಟೆ ತಿನ್ನದ ಮಕ್ಕಳಿಗೆ ವಾರದಲ್ಲಿ ೬ ದಿನ ಹಾಲನ್ನು ನೀಡಲಾಗುತ್ತಿದೆ. ಸರ್ಕಾರದ ಈ ಕ್ರಮದಿಂದಾಗಿ ೪೦ ಲಕ್ಷ ಅಂಗನವಾಡಿ ಮಕ್ಕಳು ಪೌಷ್ಟಿದಾಯಕ ಮಕ್ಕಳಾಗಿವೆ.

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ರಾಜ್ಯದಲ್ಲಿ ಅಂಗನವಾಡಿ ಮಕ್ಕಳಿಗೆ ವರದಾನವಾಗಿದೆ. 60 ಸಾವಿರಕ್ಕೂ ಹೆಚ್ಚು ಅಂಗನವಾಡಿ ಕೇಂದ್ರಗಳ ಮತ್ತು ಸುಮಾರು 3200ಕ್ಕೂ ಅಧಿಕ ಮಿನಿ ಅಂಗನವಾಡಿಗಳ 55 ಲಕ್ಷ ಮಕ್ಕಳು ಈ ಯೋಜನೆಯ ಫಲಾನುಭವಿಗಳು. ಕಳೆದ 3 ವರ್ಷಗಳಲ್ಲಿ ರೂ. 1,16,386 ಲಕ್ಷಗಳಷ್ಟು ಮೊತ್ತವನ್ನು ಈ ಯೋಜನೆಗಾಗಿ ವೆಚ್ಚ ಮಾಡಲಾಗಿದೆ.

ಸರ್ಕಾರವು ಸತತ ೩ನೇ ಭಾರಿಗೆ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಗೌರವಧನವನ್ನು ಹೆಚ್ಚಿಸಿದೆ. ೨೦೧೫ ರಿಂದ ಕ್ರಮವಾಗಿ ೫೦೦ ರೂ. ಹಾಗೂ ೨೫೦ ರೂ. ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಿದೆ. ಸ್ತ್ರೀಶಕ್ತಿ ಗುಂಪುಗಳು ಮಾರಾಟ ಮಾಡುವ ವಸ್ತುಗಳಿಗೆ ೩೦ ಜಿಲ್ಲೆಗಳಲ್ಲಿ ಸಂಚಾರಿ ವಾಹನ ಸೌಲಭ್ಯ ಯೋಜನೆ ಜಾರಿಗೆ ತಂದಿದೆ. ಸ್ತ್ರೀಶಕ್ತಿ ಸ್ವಸಹಾಯ ಗುಂಪುಗಳಿಗೆ ನೀಡುತ್ತಿರುವ ಆವರ್ತಕ ನಿಧಿಯ ಮಿತಿಯನ್ನು ೫೦೦೦ ರೂ.ಗಳಿಂದ ೨೫೦೦೦ ರೂ.ಗಳಿಗೆ ಹಂತ ಹಂತವಾಗಿ ಬಿಡುಗಡೆಗೊಳಿಸಲು ಸರ್ಕಾರದ ಆದೇಶ ಹೊರಡಿಸಿದೆ. ಗ್ರಾಮಾಂತರ ಪ್ರದೇಶದ ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ರಾಜ್ಯಾದ್ಯಂತ ೪೪ ವಸತಿ ನಿಲಯಗಳು ಕಾರ್ಯ ನಿರ್ವಹಿಸುತ್ತಿದ್ದು, ಇದರ ನಿರ್ವಹಣೆಗಾಗಿ ೪೦.೮ ಕೋಟಿ ರೂ. ವೆಚ್ಚ ಮಾಡಿದೆ.

ಆಸಿಡ್ ದಾಳಿಗೊಳಗಾದ ಮಹಿಳೆಯರಿಗೆ ಆರ್ಥಿಕ ಪರಿಹಾರ ನೀಡಲು ರಾಜ್ಯ ಮಟ್ಟದಲ್ಲಿ ೫೦ ಕೋಟಿ ರೂ.ಗಳ ಸ್ಥೈರ್ಯ ನಿಧಿಯನ್ನು ಸ್ಥಾಪಿಸಿದೆ.

**ವಿಕಲಚೇತನರ ಅಭಿವೃದ್ಧಿ:** ಅಂಗವಿಕಲರು ಸ್ವಯಂ ಉದ್ಯೋಗ ಕೈಗೊಂಡು ಸಣ್ಣ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಎಂಬ ಯೋಜನೆಯನ್ನು ಕಾರ್ಯ ರೂಪಕ್ಕೆ ತಂದಿದೆ. ಈ ಕಾರ್ಯಕ್ರಮದಡಿ ಪ್ರತಿ ಫಲಾನುಭವಿಗಳಿಗೆ ೧೫೦೦೦ ರೂ.ಗಳ ಉಚಿತ ಪೆಟ್ಟಿಗೆ ಅಂಗಡಿ ಹಾಗೂ ೨೦,೦೦೦ ರೂ.ಗಳ ನಿರ್ವಹಣಾ ಬಂಡವಾಳವನ್ನು ಬಡ್ಡಿರಹಿತ ಸಾಲದ ರೂಪದಲ್ಲಿ ನೀಡಲಾಗುತ್ತಿದೆ.

**ಹಿರಿಯ ನಾಗರಿಕರ ಅಭಿವೃದ್ಧಿ:** ಕರ್ನಾಟಕ ರಾಜ್ಯದಲ್ಲಿ ೨೦೧೧ರ ಜನಗಣತಿಯ ಅಂದಾಜಿನಂತೆ ಒಟ್ಟು ಜನಸಂಖ್ಯೆ ೬.೧೧ ಕೋಟಿ. ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ೨೭ ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.